



ಅರುಣ ಪಿ. ಭಟ್ಟ

## ವಾರಭವಿಷ್ಯ: 28.10.2021ರಿಂದ 03.11.2021




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಶುಭದಿನ 01. ಶ್ರೀ ದುರ್ಗಾಪಾರಾಯಣ ಮಾಡಿರಿ




ವ್ಯಾಪಾರಕ್ಕೆ ಸಂಬಂಧಿಸಿದ ವಿಷಯಗಳ ಪರಾಮರ್ಶೆಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಆಹಾರ ನೀರಿನ ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಲಿದ್ದು, ಅದರ ಪ್ರಭಾವ ಆರೋಗ್ಯದ ಮೇಲೂ ಆಗಲಿದೆ. ಶುಭದಿನ 28. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರದಲ್ಲಿ ಉತ್ತಮ ಹಾಗೂ ಸೂಕ್ತವಾದ ಹಲವು ಅವಕಾಶಗಳು ದೊರೆಯಲಿವೆ. ಗ್ರಹಗತಿಗಳು ಉತ್ತಮವಾಗಿ ಇರುವುದರಿಂದ ನಿಮಗೆ ದೊರೆಯುವ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ನೀವು ಹಾಕುವ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಶುಭದಿನ 29. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೃತ್ತಿಪರ ಜೀವನದಲ್ಲಿ ಕೆಲವು ಬಿಕ್ಕಟ್ಟು ಹಾಗೂ ಸಮಸ್ಯೆಗಳು ಎದುರಾಗುತ್ತವೆ. ವಾರದ ಮಧ್ಯ ಭಾಗದ ಹೊತ್ತಿಗೆ ಆರೋಗ್ಯ ಚೇತರಿಸಿಕೊಳ್ಳುತ್ತದೆ. ಕೌಟುಂಬಿಕವಾಗಿ ಸಂತೋಷ ಸಮಾಧಾನ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೈಯಕ್ತಿಕ ಸಂಬಂಧ ಮತ್ತು ಆರೋಗ್ಯ ಅತ್ಯುತ್ತಮವಾಗುತ್ತದೆ. ಶುಭದಿನ 01. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಒಂದು ಕಡೆ ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಇನ್ನೊಂದು ಕಡೆ ಮನೆಯನ್ನು ಸಲೀಸಾಗಿ ನಡೆಸಲು ಬೇಕಾದ ತೀರ್ಮಾನಗಳನ್ನು ಸರಿಯಾದ ಸಮಯದಲ್ಲಿ ಕೈಗೊಳ್ಳುತ್ತೀರಿ. ಇದರಿಂದ ನಿಮ್ಮ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚಾಗಲಿದೆ. ಶುಭದಿನ 03. ಸೌಂದರ್ಯಲಹರಿ ಪಠಿಸಿರಿ.




ವ್ಯಾಪಾರ ವ್ಯವಹಾರದ ಉನ್ನತಿಗೆ ಹೆಚ್ಚು ಶ್ರಮ ಹಾಕಲಿದ್ದೀರಿ. ಇದೇ ವೇಳೆ ಸಣ್ಣ ಪುಟ್ಟ ವರ್ತಕರ ಜತೆಗೆ ಸಂಪರ್ಕ ಸಾಧಿಸಿ, ವ್ಯಾಪಾರ ವಿಸ್ತರಣೆಗೆ ಅಗತ್ಯ ಇರುವ ನಿರ್ಧಾರಗಳನ್ನು ಮಾಡಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಜತೆಗೆ ಯಾವುದೇ ಚಿಂತೆ ಇರುವುದಿಲ್ಲ. ಶುಭದಿನ 28. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಯಶಸ್ಸು ದೊರೆಯುತ್ತದೆ. ಇನ್ನು ಲೇಖಕರಾದವರಿಗೆ ಓದುಗರಿಂದ ಪುಸ್ತಕಗಳ ಬೇಡಿಕೆ ಹೆಚ್ಚಾಗಲಿದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಉಸಿರಾಟದ ಸಮಸ್ಯೆ ಹಾಗೂ ಮಲಬದ್ಧತೆ ನಿಮ್ಮನ್ನು ಕಾಡಬಹುದು. ಸಂಗಾತಿ ಜೊತೆ ಮನರಂಜನೆ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 30. ನವಗ್ರಹ ಸ್ತೋತ್ರ ಪಠಿಸಿರಿ.




ಸಾಮಾಜಿಕ ಜೀವನದಲ್ಲಿ ನಿಮ್ಮ ಪ್ರಭಾವ ಅಷ್ಟಾಗಿ ಕೆಲಸಕ್ಕೆ ಬರುತ್ತಿಲ್ಲ ಎಂಬ ಆತಂಕ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆಗಳನ್ನು ಮಾಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಳ್ಳುತ್ತೀರಿ. ಹತ್ತಿರ ಪ್ರದೇಶಗಳಿಗೆ ಪ್ರಯಾಣ ಮಾಡಲಿದ್ದೀರಿ. ಶುಭದಿನ 02. ಶನಿ ಸ್ತೋತ್ರ ಪಠಣ ಮಾಡಿರಿ.




ಸಾರ್ವಜನಿಕ ಸಂಪರ್ಕ ಹೆಚ್ಚು ಮಾಡಿಕೊಳ್ಳಲು ವಾರದ ಶುರುವಿನಿಂದಲೇ ಹೆಚ್ಚು ಶ್ರಮ ಹಾಕುತ್ತೀರಿ. ಈ ಸಮಯದಲ್ಲಿ ಆರೋಗ್ಯ ಚೆನ್ನಾಗಿದೆ ಎಂದು ನಿಮಗೇ ಅನಿಸುತ್ತದೆ. ವೈವಾಹಿಕ ಜೀವನವು ಸಾಮಾನ್ಯವಾಗಿರುತ್ತದೆ. ಬಿಡುವಿಲ್ಲದ ಉದ್ಯೋಗದ ಮಧ್ಯೆಯೂ ಕುಟುಂಬ ಜೀವನಕ್ಕೆ ಹೆಚ್ಚಿನ ಸಮಯವನ್ನು ಇಡಬೇಕಾಗುತ್ತದೆ. ಶುಭದಿನ 29. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯಾಪಾರದಲ್ಲಿ ಹೆಚ್ಚು ಗಮನ ನೀಡಬೇಕಾಗುತ್ತದೆ. ನಿಮ್ಮ ಕೈ ಕೆಳಗೆ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡುತ್ತೀರಿ. ಇನ್ನು ಉತ್ಪಾದನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಣಕಾಸಿನ ಕೊರತೆ ಹಾಗೂ ಕಚ್ಚಾ ವಸ್ತುಗಳ ಕೊರತೆ ಕಾಡಲಿದೆ. ಅನಾರೋಗ್ಯ ಸಮಸ್ಯೆಗಳು ಈ ಅವಧಿಯಲ್ಲಿ ಕಾಡಬಹುದು. ಶುಭದಿನ 28. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಆ ನಂತರ ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಭೂಮಿ ಖರೀದಿ ಮಾಡುವ ಸಾಧ್ಯತೆಗಳಿವೆ. ಶುಭದಿನ 03. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ನೀವು ಖರ್ಚು ಮಾಡಿದ ಹಣಕ್ಕೆ ತಕ್ಕ ಪ್ರತಿಫಲ ಇಲ್ಲ ಎಂದು ಸ್ವಲ್ಪ ಮಟ್ಟಿಗೆ ಬೇಸರ ಆಗುತ್ತದೆ. ಇನ್ನು ಆರೋಗ್ಯ ಉತ್ತಮವಾಗಿರುತ್ತದೆ. ವೈಯಕ್ತಿಕ ಜೀವನ ಸುಖವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಪ್ರೇಮಿಗಳಿಗೆ ಪ್ರೇಮ ನಿವೇದನೆ ಮಾಡಿಕೊಳ್ಳುವ ಸಾಧ್ಯತೆ ಹೆಚ್ಚಾಗಿದೆ. ಈ ಅವಧಿಯಲ್ಲಿ ಹಣಕಾಸಿನ ಹರಿವು ಉತ್ತಮವಾಗಿ ಇರಲಿದೆ. ಶುಭದಿನ 28. ಚಂಡಿ ಪಾರಾಯಣ ಮಾಡಿರಿ.